ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಕೃಷಿ ಭೂಮಿಯನ್ನು ವಸತಿ ಬಡಾವಣೆಗಳನ್ನಾಗಿ ನಿರ್ಮಿಸುತ್ತಿರುವ ಬಗ್ಗೆ

ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು):-

185(306) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಲ್ಲಾ ಭಾಗದಲ್ಲೂ ಕೃಷಿ ಭೂಮಿಯನ್ನು ವಾಸದ ಬಡಾವಣೆಯಾಗಿ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೃಷಿ ಭೂಮಿಯನ್ನು ಭೂ ಪರಿವರ್ತನೆಗೊಳಿಸದೆ ಬಡಾವಣೆ ನಿರ್ಮಿಸಿ, ಆ ಜಾಗದಲ್ಲಿ ಕಟ್ಟಡದ ನಿರ್ಮಾಣ ಮಾಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಬರಬೇಕಾದ ಆದಾಯವನ್ನು ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?